## ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ

## ಸಿ.ಸಿ.ಸಂಖ್ಯೆ: **1513/2024**

ಪಿರ್ಯಾದಿ : ಶ್ರೀ ಕಾಲಭೈರವೇಶ್ವರ ವಿವಿದೋದ್ದೇಶ
ಸಹಕಾರ ಸಂಘ ಲಿಮಿಟೆಡ್,
ಮೂಡಿಗೆರೆ ಶಾಖೆ, ಬೇಲೂರು ರಸ್ತೆ,
ಮೂಡಿಗೆರೆ, ಇದರ ಪರವಾಗಿ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,
ಶ್ರೀ ಕೌಶಿಕ್ ಟಿ.ಪಿ,.

ವಿರುದ್ಧ

ಆರೋಪಿ : ಶ್ರೀ ಸುಧಾಕರ.ಎಂ.ಕೆ,
ವಯಸ್ಸು ಸುಮಾರು 35 ವರ್ಷ,
ಬಿನ್ ಕಲ್ಲೇಶ್,
ವಾಸಃ ಮಾಕೋನಹಳ್ಳಿ ಗ್ರಾಮ ಮತ್ತು ಅಂಚೆ,
ಮೂಡಿಗೆರೆ ತಾಲ್ಲೂಕು.

### ಆಪಾದನೆಯ ಸಾರಾಂಶ

ಶ್ರೀ ವಿಶ್ವನಾಥ್ ಎ., ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ, ಆದ ನಾನು ಆರೋಪಿಯಾದ ನಿಮ್ಮ ಮೇಲೆ ಮಾಡುವ ಆಪಾದನೆ ಏನೆಂದರೆಃ-

ಆರೋಪಿಯಾದ ನೀವು ಫಿರ್ಯಾದಿಯ ಸಹಕಾರ ಸಂಘದ ಸದಸ್ಯರಾಗಿದ್ದು, ನಿಮ್ಮ ಹಣದ ಅವಶ್ಯಕತೆಗಳಿಗೋಸ್ಕರ ಅವರಿಂದ ದಿನಾಂಕಃ 10.12.2021 ರಂದು 50,000/- ರೂಪಾಯಿಗಳನ್ನು ಸಾಲವಾಗಿ ಪಡೆದಿದ್ದು, ಸದರಿ ಸಾಲದ ಮರುಪಾವತಿಗಾಗಿ ನಿಮ್ಮ ಖಾತೆ ಹೊಂದಿರುವ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಮಾಕೋನಹಳ್ಳಿ ಶಾಖೆಯ ಚೆಕ್ ಸಂಖ್ಯೆಃ 154083, ದಿನಾಂಕ 03.06.2024, ರೂ.66,680/- ಎಂದು ನಮೂದಿಸಿ ನೀಡಿದ್ದು, ಸದರಿ ಚೆಕ್ ಅನ್ನು ಫಿರ್ಯಾದಿಯು ಸಿ.ಡಿ.ಸಿ.ಸಿ ಬ್ಯಾಂಕ್ ಲಿಮಿಟೆಡ್, ಮೂಡಿಗೆರೆ ಶಾಖೆಯಲ್ಲಿ ಜಮೆಗಾಗಿ ಸಲ್ಲಿಸಿದಾಗ, 'Kindly Contact Drawer Drawee Bank & Please Present Again' ಎಂದು ಹಿಂಬರಹ ನೀಡಿದ್ದು ಇರುತ್ತದೆ. ಕಾರಣ, ಫಿರ್ಯಾದಿಯು ದಿನಾಂಕ 02.07.2024 ರಂದು ನೋಟೀಸ್ ಮೂಲಕ ಆರೋಪಿಯಾದ ನಿಮಗೆ ಸದರಿ ವಿಚಾರವನ್ನು ತಿಳಿಸಿದರೂ ಸಹ ನೀವು ಹಣವನ್ನು ವಾಪಸ್ ಮಾಡಿರುವುದಿಲ್ಲ. ಈ ರೀತ್ಯಾ ನೀವು

ನೆಗೋಷಿಬಲ್ ಇನ್ಸ್ಟ್ರುಮೆಂಟ್ ಆಕ್ಟ್ ಕಲಂ **138** ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಮಾಡಿರುವಿರಿ ಎಂದು ಆಪಾದಿಸಲಾಗಿದೆ**?**

ಪ್ರಃ 1. ಈಗ ಮೇಲೆ ಓದಿ ಹೇಳಿದ ಆಪಾದನೆಯನ್ನು ಕೇಳಿದ್ದೀರಾ**?** ಅದು ನಿಮಗೆ ಅರ್ಥವಾಯಿತೇ**?**

ಆರೋಪಿಯ ಉತ್ತರಃ

ಪ್ರಃ 2. ನೀವು ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ**?**

ಆರೋಪಿಯ ಉತ್ತರಃ

**(**ಆರೋಪಿಗೆ ದಿನಾಂಕ 24.02.2025 ರಂದು ಆಪಾದನೆಯ ಸಾರಾಂಶವನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ**,** ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು**.** ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ**)**

**Sd/-**

ಮೂಡಿಗೆರೆ
ದಿನಾಂಕಃ 24.02.2025

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ**.**ಎಂ**.**ಎಫ್**.**ಸಿ**,** ಮೂಡಿಗೆರೆ**.**